Bruhat Bengaluru Mahanagara Palike

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ಕೆಂಗೇರಿ ಉಪ ವಿಭಾಗ, ವಾರ್ಡ್ ನಂ.198, ಹೆಮ್ಮಿಗೆಪುರ

## ವಾರ್ಡ್ ಸಮಿತಿ ಸಭೆ ದಿನಾಂಕ: 03/04/2021 ರ

## ಸಭಾ ನಡವಳಿ

ದಿನಾಂಕ: 03/04/2021 ರಂದು ಬೆಳಿಗ್ಗೆ 11.30 ಗಂಟೆಗೆ ವಾರ್ಡ್ ನಂ.198, ಹೆಮ್ಮಿಗೆಪುರ ವ್ಯಾಪ್ತಿಯಲ್ಲಿ ವಾರ್ಡ್ ಸಮಿತಿಯನ್ನು ನೋಡಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ಪಟ್ಟಣಗೆರೆ, ಬಿ.ಬಿ.ಎಂ.ಪಿ. ಸಮುದಾಯಭವನ ಕಟ್ಟಡದಲ್ಲಿ ನಡೆದ ವಾರ್ಡ್ ಸಮಿತಿಯ ಸಭೆಯ ನಡವಳಿಗಳು

<u>ಹಾಜರಿದ್ದವರು:</u>

| ಕ್ರ ಸಂ | ಸಭೆಗೆ ಹಾಜರಾಗಿರುವ ಅಧಿಕಾರಿಗಳು | ಹುದ್ದೆ |
|---|---|---|
| 1 | ಶ್ರೀ ಶಿವಕುಮಾರ್ | ನೋಡಲ್ ಅಧಿಕಾರಿ, ವಾರ್ಡ್ ನಂ.198(ಹೆಮ್ಮಿಗೆಪುರ) ಹಾಗೂ ಕಾರ್ಯಪಾಲಕ ಅಭಿಯಂತರರು, ಉಪ ನಿರ್ದೇಶಕರ ಕಛೇರಿ ಕಟ್ಟಡ ಪರವಾನಗೆ ಕೋಶ-ಉತ್ತರ |
| 2 | ಶ್ರೀ ದಯಾನಂದ.ಎನ್ | ಸಹಾಯಕ ಅಭಿಯಂತರರು, ವಾರ್ಡ್-198, ಹೆಮ್ಮಿಗೆಪುರ |
| 3 | ಶ್ರೀ ಸಿ.ವಿ. ಸೂರ್ಯನಾರಾಯಣ | ಜಲ ಪರಿವೀಕ್ಷಕರು ಬಿ.ಡಬ್ಲ್ಯೂ.ಎಸ್.ಎಸ್.ಬಿ |
| 4 | ಜಿ.ಸಿ. ಕೆಂಪೇಗೌಡ | ಕಿರಿಯ ಅಭಿಯಂತರರು ಬೆಸ್ಕಾಂ |
| 5 | ಮೋನಿಕ ಎಸ್.ಡಿ | ಕಿರಿಯ ಆರೋಗ್ಯ ಪರಿವೀಕ್ಷಕರು ಬಿ.ಬಿ.ಎಂ.ಪಿ. |
| 6 | ಶ್ರೀ ಎ.ಎಸ್. ಕೃಷ್ಣಾನಾಯಕ್ | ಕೆಲಸ ಪರಿವೀಕ್ಷಕರು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ |

ಶ್ರೀ ದಯಾನಂದ.ಎನ್, ಸಹಾಯಕ ಅಭಿಯಂತರರು ಹಾಗೂ ವಾರ್ಡ್ ಕಮಿಟಿ ಕಾರ್ಯದರ್ಶಿ ರವರು ಸಭೆಯನ್ನು ಉದ್ದೇಶಿಸಿ ಮಾತನಾಡುತ್ತಾ, ಸಭೆಗೆ ಹಾಜರಾಗಿದ್ದ ವಿವಿಧ ಇಲಾಖೆಯ ಅಧಿಕಾರಿಗಳು ಹಾಗೂ

Scanned with CamScanner

ಬಡಾವಣೆಯ ಕ್ಷೇಮಾಭಿವೃದ್ಧಿ ಸಂಘದ ಪದಾಧಿಕಾರಿಗಳು ಹಾಗೂ ಸಾರ್ವಜನಿಕರಿಗೆ ಸ್ವಾಗತಿಸುವ ಮೂಲಕ ಸಭೆಯನ್ನು ಪ್ರಾರಂಭಿಸುತ್ತಾ ಹಿಂದಿನ ಸಭಾ ನಡವಳಿಯನ್ನು ಓದಿ ರೆಕಾರ್ಡ್ ಮಾಡಲಾಯಿತು ಮತ್ತು ತೆಗೆದುಕೊಂಡ ಕ್ರಮಗಳ ಬಗ್ಗೆ ಚರ್ಚಿಸಲಾಯಿತು.

1. **ಕೋವಿಡ್–19 ಸಾಂಕ್ರಾಮಿಕ ರೋಗದ ಬಗ್ಗೆ:–** ಅಧ್ಯಕ್ಷರು, ಕೋವಿಡ್–19ರ ಸಾಂಕ್ರಾಮಿಕ ರೋಗದ ಬಗ್ಗೆ ಹಾಗೂ ಸರ್ಕಾರ ಮತ್ತು ಬಿ.ಬಿ.ಎಂ.ಪಿ. ವತಿಯಿಂದ ನೀಡುತ್ತಿರುವ ಸೌಲಭ್ಯ/ಸೌವಲತ್ತುಗಳು ಹಾಗೂ ಕೋವಿಡ್ ಪರಿವೀಕ್ಷಣೆಯಿಂದ ಮೊದಲುಗೊಂಡು ಆಸ್ಪತ್ರೆಗೆ ದಾಖಲಾಗುವವರೆಗೆ ಮತ್ತು ಕೋವಿಡ್–19 ಪರೀಕ್ಷೆಯ ಬಗ್ಗೆ ಸವಿಸ್ತಾರವಾಗಿ ಸಭೆಗೆ ವಿವರಿಸಿದರು. ಕೋವಿಡ್–19ರ ಪರೀಕ್ಷೆಯನ್ನು ಹೆಚ್ಚು ಮಾಡುವ ಬಗ್ಗೆ ಸಹಕರಿಸುವಂತೆ ಸಭೆಯಲ್ಲಿದ್ದ ವೆಲ್‌ಫೇರ್ ಅಸೋಸಿಯೇಷನ್ ಅಧ್ಯಕ್ಷರುಗಳು ಮತ್ತು ಅಧಿಕಾರಿ ವರ್ಗದವರಿಗೆ ವಿನಂತಿಸಿ, ಆರೋಗ್ಯ ಪರಿವೀಕ್ಷಕರು ಮತ್ತು ಆರೋಗ್ಯಾಧಿಕಾರಿಗಳು ಸದರಿಯವರನ್ನು ಸಂಪರ್ಕಿಸಿ ಸಹಕಾರ ಪಡೆದುಕೊಳ್ಳಲು ಸೂಚಿಸಿದರು ಮತ್ತು ಮಾಷಲ್‌ಗಳನ್ನು ನಿಯೋಜಿಸಿ ಮಾಸ್ಕ್ ಧರಿಸದೇ ಇರುವವರಿಗೆ ದಂಡವನ್ನು ವಿಧಿಸಲು ಸೂಚಿಸಲಾಯಿತು.

2. **ಬೆಂಗಳೂರು ಜಲ ಮಂಡಳಿಗೆ ಸಂಬಂಧಿಸಿದ:–** ವಾರ್ಡ್ ನಂ.198ರಲ್ಲಿ ಬರುವ ವಾಜರಹಳ್ಳಿ ಬಾಲಾಜಿ ಬಾಡಾವಣೆ ನೀರು ಸರಬರಾಜು ವಾಲ್‌ಗಳು ಬೋರ್‌ವೆಲ್ ಜಾಯಿಂಟ್‌ಗಳಲ್ಲಿ ನೀರು ಪೋಲಾಗುತ್ತಿರುವ ಬಗ್ಗೆ ಹಾಗೂ ಅದನ್ನು ದುರಸ್ಥಿ ಪಡಿಸುವ ಬಗ್ಗೆ ಸಭೆಯ ಗಮನಕ್ಕೆ ತರಲಾಯಿತು ಈ ಸಂಬಂಧ ನೋಡಲ್ ಅಧಿಕಾರಿಗಳು ಮಾತನಾಡಿ ಈ ಸಂಬಂಧ ಕ್ರಮ ಕೈಗೊಳ್ಳುವಂತೆ ಹಾಜರಿದ್ದ ಬಿಬಿಎಂಪಿ ಸಹಾಯಕ ಇಂಜಿನಿಯರ್ ರವರಿಗೆ ಸೂಚಿಸಿದರು. ಸದರಿಯವರು ಮಾತನಾಡಿ ವಾಲ್‌ಗಳನ್ನು ಮತ್ತು ಲೀಕೇಜ್‌ಗಳನ್ನು ರಿಪೇರಿ ಮಾಡಿಸುವ ಬಗ್ಗೆ ಸಭೆಗೆ ತಿಳಿಸಿದರು.

3. **ವಿದ್ಯುತ್ ಬೀದಿ ದೀಪಗಳ ನಿರ್ವಹಣೆ:–** ವಾರ್ಡ್ ನಂ.198ರ ವ್ಯಾಪ್ತಿಯಲ್ಲಿ ಬರುವ ಬಸಪ್ಪ ಬಡಾವಣೆಯಲ್ಲಿ 3ನೇ & 4ನೇ ಅಡ್ಡ ರಸ್ತೆಯಲ್ಲಿರುವ ವಿದ್ಯುತ್ ಕಂಬಗಳಿಗೆ ಬೀದಿ ದೀಪಗನ್ನು ಅಳವಡಿಸಬೇಕೆಂದು ಸಭೆಗೆ ತಿಳಿಸಿದರು. ಈ ಸಂಬಂಧ ನೋಡಲ್ ಅಧಿಕಾರಿಗಳು ಮಾತನಾಡಿ ಹೊಸ ಬೀದಿ ದೀಪಗಳನ್ನು ಅಳವಡಿಸಲು ಗ್ಲೋಬಲ್ ಟೆಂಡರ್ ಮುಖಾಂತರ ವಿದ್ಯುತ್ ಉಳಿತಾಯ ಮಾಡುವ ದೃಷ್ಟಿಯಿಂದ ಎಲ್.ಇ.ಡಿ. ಬೀದಿ ದೀಪಗಳನ್ನು ಅಳವಡಿಸುವ ಪ್ರಕ್ರಿಯೆಯು ಪ್ರಗತಿಯಲ್ಲಿದ್ದು, ಮಂಜೂರಾದ ನಂತರ ಹೊಸ ವಿದ್ಯುತ್ ದೀಪಗಳನ್ನು ಒದಗಿಸುವುದಾಗಿ ಸಭೆಗೆ ತಿಳಿಸಿದರು.

Scanned with CamScanner

4. <u>ಬೆಂಗಳೂರು ಜಲ ಮಂಡಳಿ</u>:- ವಾರ್ಡ್ ನಂ.198ರ ವ್ಯಾಪ್ತಿಯಲ್ಲಿ ಬರುವ ಬಸಪ್ಪ ಬಡಾವಣೆಯಲ್ಲಿನ ಒಳಚರಂಡಿ ಕೊಳವೆಯು ಕಟ್ಟಿಕೊಂಡಿದ್ದು, ದುರಸ್ಥಿಗೊಳಿಸಬೇಕೆಂದು ಸಭೆಗೆ ತಿಳಿಸಿದರು. ಈ ಸಂಬಂಧ ನೋಡಲ್ ಅಧಿಕಾರಿಗಳು ಮಾತನಾಡಿ ಸಭೆಯಲ್ಲಿ ಹಾಜರಿದ್ದ ಜಲ ಮಂಡಳಿ ಅಧಿಕಾರಿಗಳಿಗೆ ತುರ್ತಾಗಿ ದುರಸ್ಥಿಪಡಿಸಿಕೊಡಬೇಕಾಗಿ ಕೋರಿದರು.

5. <u>ಘನತ್ಯಾಜ್ಯ ನಿರ್ವಹಣೆ</u>:-ವಾರ್ಡ್ ನಂ.198ರ ವ್ಯಾಪ್ತಿಯಲ್ಲಿ ಬರುವ ವಿಜಯಶ್ರೀ ಬಡಾವಣೆಯಲ್ಲಿ ರಸ್ತೆಯಲ್ಲಿರುವ ಕಸವನ್ನು ಗುಡಿಸಿ ಒಂದೆಡೆ ಶೇಖರಣೆ ಮಾಡುತ್ತಿದ್ದು, ತ್ಯಾಜಯವನ್ನು ಅಲ್ಲಿಂದ ತೆರವುಗೊಳಿಸದಿರುವ ಬಗ್ಗೆ ಸಭೆಯ ಗಮನಕ್ಕೆ ತರಲಾಯಿತು. ಈ ಸಂಬಂಧ ನೋಡಲ್ ಅಧಿಕಾರಿಗಳು ಮಾತನಾಡಿ ಸಭೆಯಲ್ಲಿ ಹಾಜರಿದ್ದ ವಾರ್ಡ್‌ನ ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ದೈನಂದಿನ ತ್ಯಾಜ್ಯವನ್ನು ಅಂದೇ ಸ್ಥಳದಿಂದ ಆಟೋ ಟಿಪ್ಪರ್‌ಗಳ ಮೂಲಕ ತೆರವುಗೊಳಿಸಲು ಸೂಚಿಸಿದರು.

6. <u>ವಾರ್ಡ್‌ನ ವಿವಿಧ ಕಾಮಗಾರಿಗಳ ಅಭಿವೃದ್ಧಿ ಕಾರ್ಯಗಳ ಬಗ್ಗೆ</u>:- 1)ವಾರ್ಡ್ ನಂ.198ರ ವ್ಯಾಪ್ತಿಯಲ್ಲಿ ಬರುವ ಬಸಪ್ಪ ಬಡಾವಣೆಯ ಮುಖ್ಯರಸ್ತೆಯಲ್ಲಿ ಮ್ಯಾನ್ ಹೋಲ್ ಕವರ್ ಹೊಡೆದು ಹೋಗಿದ್ದು, ದುರಸ್ಥಿಪಡಿಸಲು ಸಭೆಯ ಗಮನಕ್ಕೆ ತರಲಾಯಿತು. ಈ ಸಂಬಂಧ ವಾರ್ಡ್‌ನ ಸಹಾಯಕ ಅಭಿಯಂತರರು ಮಾತನಾಡಿ ಹೊಸ ಮ್ಯಾನ್‌ಹೋಲ್ ಕವರ್ ಅಳವಡಿಸುವ ಬಗ್ಗೆ ಸಭೆಗೆ ತಿಳಿಸಿದರು.

2) ವಾರ್ಡ್ ನಂ.198ರ ವ್ಯಾಪ್ತಿಯಲ್ಲಿ ಬರುವ ಬಿ.ಹೆಚ್.ಇ.ಎಲ್. ಉತ್ತರ ಬಡಾವಣೆಯಲ್ಲಿ ಯಾವುದೇ ರಸ್ತೆಗಳಿಗೆ ಡಾಂಬರೀಕರಣ ಹಾಗೂ ಅಭಿವೃದ್ದಿಯಾಗದೇ ಇರುವ ಬಗ್ಗೆ ಸಭೆಯ ಗಮನಕ್ಕೆ ತರಲಾಯಿತು. ಈ ಸಂಬಂಧ ನೋಡಲ್ ಅಧಿಕಾರಿಗಳು ಮಾತನಾಡಿ ಪಾಲಿಕೆಯ ವತಿಯಿಂದ/ ಸರ್ಕಾರದ ಅನುದಾನ ಲಭ್ಯವಾದಲ್ಲಿ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳುವ ಬಗ್ಗೆ ಸಭೆಯ ಗಮನಕ್ಕೆ ತಿಳಿಸಿದರು.

3) ವಾರ್ಡ್ ನಂ.198ರ ವ್ಯಾಪ್ತಿಯಲ್ಲಿ ಬರುವ ಕೃಷ್ಣಾ ಗಾರ್ಡನ್ ಬಡಾವಣೆಯಲ್ಲಿ ಡಾಂಬರೀಕರಣ ರಸ್ತೆಗಳನ್ನು ಮಾಡಿದ್ದು, ರಸ್ತೆ ಬದಿಯಲ್ಲಿ ಡೆಬ್ರೀಸ್ ಬಿದ್ದಿರುವ ಬಗ್ಗೆ ಸಭೆಯ ಗಮನಕ್ಕೆ ತರಲಾಯಿತು. ಈ ಸಂಬಂಧ ವಾರ್ಡ್‌ನ ಸಹಾಯಕ ಅಭಿಯಂತರರು ಮಾತನಾಡಿ ತೆರವುಗೊಳಿಸಲು ಕ್ರಮ ಕೈಗೊಳ್ಳುವುದಾಗಿ ಸಭೆಗೆ ತಿಳಿಸಿದರು.

4) ವಾರ್ಡ್ ನಂ.198ರ ವ್ಯಾಪ್ತಿಯಲ್ಲಿ ಬರುವ ಬಸಪ್ಪ ಬಡಾವಣೆ 4ನೇ ಅಡ್ಡರಸ್ತೆಯಲ್ಲಿ ರಸ್ತೆಯ ಒಂದು ಬದಿಯಲ್ಲಿ ಕಾಂಕ್ರೀಟ್ ಚರಂಡಿ ಅವಶ್ಯಕತೆ ಇರುವ ಬಗ್ಗೆ ಸಭೆಯ ಗಮನಕ್ಕೆ ತರಲಾಯಿತು. ಈ ಸಂಬಂಧ

Scanned with CamScanner

ನೋಡಲ್ ಅಧಿಕಾರಿಗಳು ಮಾತನಾಡಿ ಪಾಲಿಕೆಯ ವತಿಯಿಂದ/ ಸರ್ಕಾರದ ಅನುದಾನ ಲಭ್ಯವಾದಲ್ಲಿ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳುವ ಬಗ್ಗೆ ಸಭೆಯ ಗಮನಕ್ಕೆ ತಿಳಿಸಿದರು.

(ದಯಾನಂದ.ಎನ್)
ಕಾರ್ಯದರ್ಶಿ
ಹಾಗೂ ಸಹಾಯಕ ಅಭಿಯಂತರರು
ವಾರ್ಡ್–198, ಹೆಮ್ಮಿಗೆಪುರ

(ಶಿವಕುಮಾರ್)
ನೋಡಲ್ ಅಧಿಕಾರಿ
ವಾರ್ಡ್ ಸಮಿತಿ
ವಾರ್ಡ್–198, ಹೆಮ್ಮಿಗೆಪುರ

ಪ್ರತಿಯನ್ನು:-

1) ಮಾನ್ಯ ಸಹಕಾರ ಸಚಿವರು, ಕರ್ನಾಟಕ ಸರ್ಕಾರ ರವರ ಕಛೇರಿಗೆ ಸಲ್ಲಿಸಿದೆ.
2) ಕೌನ್ಸಿಲ್ ಕಾರ್ಯದರ್ಶಿ, ಬಿ.ಬಿ.ಎಂ.ಪಿ. ಕೇಂದ್ರ ಕಛೇರಿ ರವರ ಅವಗಾಹನೆಗೆ ಸಲ್ಲಿಸಿದೆ.
3) ಜಂಟಿ ಆಯುಕ್ತರು, ರಾಜರಾಜೇಶ್ವರಿನಗರ ವಲಯರವರ ಅವಗಾಹನೆಗೆ ಸಲ್ಲಿಸಿದೆ.
4) ಮುಖ್ಯ ಅಭಿಯಂತರರು, ರಾಜರಾಜೇಶ್ವರಿನಗರ ವಲಯರವರ ಅವಗಾಹನೆಗೆ ಸಲ್ಲಿಸಿದೆ.
5) ಅಧೀಕ್ಷಕ ಅಭಿಯಂತರರು, ಘನತ್ಯಾಜ್ಯ ನಿರ್ವಹಣೆ, ರಾಜರಾಜೇಶ್ವರಿನಗರ ವಲಯರವರ ಅವಗಾಹನೆಗೆ ಸಲ್ಲಿಸಿದೆ.
6) ಕಾರ್ಯಪಾಲಕ ಅಭಿಯಂತರರು (ಕೆಂಗೇರಿ ವಿಭಾಗ) ರವರ ಅವಗಾಹನೆಗೆ ಸಲ್ಲಿಸಿದೆ.
7) ಕಂದಾಯ ಅಧಿಕಾರಿಗಳು (ಕೆಂಗೇರಿ ವಲಯ) ರವರ ಮಾಹಿತಿಗಾಗಿ ಕಳುಹಿಸಿದೆ.
8) ಕಾರ್ಯಪಾಲಕ ಅಭಿಯಂತರರು (ರಸ್ತೆ ಮೂಲಭೂತ ಸೌಕರ್ಯ, ರಾಜರಾಜೇಶ್ವರಿನಗರ ವಿಭಾಗ) ರವರ ಅವಗಾಹನೆಗೆ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.
9) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಂಗಳೂರು ಜಲ ಮಂಡಳಿ, ರಾಜರಾಜೇಶ್ವರಿನಗರ ಉಪವಿಭಾಗ ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.
10) ಕಾರ್ಯಪಾಲಕ ಅಭಿಯಂತರರು, ಬೃಹತ್ ನೀರುಗಾಲುವೆ ವಿಭಾಗ, ರಾಜರಾಜೇಶ್ವರಿನಗರ ವಲಯ ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.
11) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ, ಕೆಂಗೇರಿ ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.
12) ತೋಟಗಾರಿಕಾ ಅಧೀಕ್ಷಕರು, ರಾಜರಾಜೇಶ್ವರಿನಗರ ವಲಯ ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.
13) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಂಗಳೂರು ಜಲ ಮಂಡಳಿ, ರಾಜರಾಜೇಶ್ವರಿನಗರ ಯೋಜನಾ (110 ಹಳ್ಳಿಗಳು) ಉಪವಿಭಾಗ ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.

Scanned with CamScanner